ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ

ದಿನಾಂಕ : DATE : 14/3/2019

# ಎಸ್. ಮೂರ್ತಿ ಅರ್ಜಿ ವಿಚಾರಣೆ ಪೂರ್ಣ

ಬೆಂಗಳೂರು: ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ತಮ್ಮನ್ನು ಅಮಾನತುಗೊಳಿಸಿದ ವಿಧಾನಸಭೆ ವಿಶೇಷ ಮಂಡಳಿಯ ಕ್ರಮ ಪ್ರಶ್ನಿಸಿ ಎಸ್. ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ಪೂರ್ಣಗೊಳಿಸಿರುವ ಹೈಕೋರ್ಟ್, ತೀರ್ಪು ಕಾಯ್ದಿರಿಸಿದೆ. ಅಮಾನತು ಆದೇಶ ರದ್ದುಪಡಿಸುವಂತೆ ಕೋರಿ ಎಸ್.ಮೂರ್ತಿ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಬುಧವಾರ ಪೂರ್ಣಗೊಳಿಸಿದ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಅವರಿದ್ದ ಪೀಠ, ತೀರ್ಪು ಕಾಯ್ದಿರಿಸಿತು. ಆರೋಪಗಳಿಗೆ ವಿವರಣೆ ನೀಡಲು ಅವಕಾಶ ಕಲ್ಪಿಸಿಲ್ಲ. ಏಕಪಕ್ಷೀಯವಾಗಿ ಆದೇಶ ಹೊರಡಿಸಲಾಗಿದೆ ಎಂಬುದು ಮೂರ್ತಿ ಅವರ ವಾದ. ಆರೋಪಗಳು ಮೇಲ್ನೋಟಕ್ಕೆ ಸಾಬೀತು ಆಗಿರುವುದರಿಂದಲೇ ಅಮಾನತು ಮಾಡಲಾಗಿದೆ ಎಂದು ಸರ್ಕಾರ ತಿಳಿಸಿದೆ.